# ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ ಶ್ರೀ ಎಸ್.ವ್ಹಿ. ಸಂಕನೂರ, ಶ್ರೀ ಪುಟ್ಟಣ್ಣ, ಶ್ರೀ ಎಸ್.ಎಲ್. ಭೋಜೇಗೌಡ ಮತ್ತು ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ರವರುಗಳು ನಿಯಮ 72ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ.**

## :ಸೂಚನೆ:

ರಾಜ್ಯದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಕಳೆದ 4-5 ವರ್ಷಕ್ಕೂ ಮೇಲ್ಪಟ್ಟು ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಎಐಸಿಟಿಇ ನಿಯಮಾವಳಿ ಪ್ರಕಾರ, ಹರಿಯಾಣ, ಹಿಮಾಚಲ ಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳ ಮಾದರಿಯಂತೆ ಸೇವಾ ಭದ್ರತೆ ಹಾಗೂ ವೇತನ ಹೆಚ್ಚಳ ಒದಗಿಸುವ ಕುರಿತು.

## :ಉತ್ತರ:

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಪ್ರಸ್ತುತ 109 ಸರ್ಕಾರಿ ಪಾಲಿಟೆಕ್ನಿಕ್‌ಗಳು ಕಾರ್ಯನಿರ್ವಹಿಸುತ್ತಿವೆ. ಸರ್ಕಾರದ ಆದೇಶ ಸಂಖ್ಯೆ: ಇಡಿ 87 ಡಿಟಿಇ 2025 ದಿನಾಂಕ:14-07-2025 ರಂತೆ, ಸರ್ಕಾರಿ ಪಾಲಿಟೆಕ್ನಿಕ್‌ಗಳು ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳನ್ನು ಒಳಗೊಂಡಂತೆ ಒಟ್ಟಾರೆ 1599 ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ. ಸದರಿ ಆದೇಶದ ಅನುಸಾರವಾಗಿ, ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಿಗೆ ಕೌನ್ಸಿಲಿಂಗ್ ಪ್ರಕ್ರಿಯೆ ಮುಖಾಂತರ 1510 ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲಾಗಿದೆ.

ಹರಿಯಾಣ ರಾಜ್ಯವು ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರಿಗಾಗಿ The Haryana Technical Education Guest Faculty Act, 2024 (Act No.2 of 2025) ಎಂಬ ಅಧಿನಿಯಮವನ್ನು ರೂಪಿಸಿಕೊಂಡಿದ್ದು, ಸದರಿ ಅಧಿನಿಯಮದಲ್ಲಿ ಸೇವಾ ಭದ್ರತೆ, ವೇತನ ಹೆಚ್ಚಳ ಹಾಗೂ ಗುತ್ತಿಗೆ ಉಪನ್ಯಾಸಕರ ಇತರೆ ಸೇವಾ ವಿಷಯಗಳಿಗೆ ನಿಯಮಗಳನ್ನು ರೂಪಿಸಲಾಗಿದೆ. ಈ ಅಧಿನಿಯಮಗಳು ಗುತ್ತಿಗೆ ಆಧಾರದ ಮೇರೆಗೆ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರಿಗೆ ಮಾತ್ರ ಅನ್ವಯವಾಗುತ್ತವೆ. ಅಲ್ಲದೆ, ತೆಲಂಗಾಣ ಹಾಗೂ ಹಿಮಾಚಲ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ ಒದಗಿಸಿರುವ ಕುರಿತು ಯಾವುದೇ ಮಾಹಿತಿ ಲಭ್ಯವಿರುವುದಿಲ್ಲ. ಜೊತೆಗೆ, AICTE Approval Handbook 2024-27 ರಲ್ಲಿಯೂ ಅತಿಥಿ ಉಪನ್ಯಾಸಕರ ಸೇವಾ ಭದ್ರತೆ ಕುರಿತು ಯಾವುದೇ ಉಲ್ಲೇಖಗಳು ಕಂಡುಬರುವುದಿಲ್ಲ. ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಗುತ್ತಿಗೆ ಆಧಾರದ ಮೇರೆಗೆ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿಲ್ಲ.

....... ..2

ರಾಜ್ಯ ಸರ್ಕಾರವು ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಕಾಲಕಾಲಕ್ಕೆ ವೇತನ ಹಾಗೂ ಸಂಬಂಧಿತ ಸೌಲಭ್ಯಗಳನ್ನು ಪರಿಷ್ಕರಿಸುತ್ತಾ ಬಂದಿದ್ದು, ಅದರ ವಿವರಗಳು ಈ ಕೆಳಕಂಡಂತಿವೆ:

1. ಸರ್ಕಾರದ ಆದೇಶ ಸಂಖ್ಯೆ:ಇಡಿ 122 ಡಿಟಿಇ 2023, ದಿನಾಂಕ:27.09.2024 ರಂತೆ, ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಇದುವರೆಗೆ ಪಾವತಿಸಲಾಗುತ್ತಿದ್ದ ರೂ. 12,500/- ಗೌರವಧನವನ್ನು ಪರಿಷ್ಕರಿಸಿ ಹೆಚ್ಚಿಸಲಾಗಿದ್ದು, ಅವರ ವಿದ್ಯಾರ್ಹತೆ ಹಾಗೂ ಸಲ್ಲಿಸಿರುವ ಸೇವಾವಧಿಗೆ ಅನುಗುಣವಾಗಿ ಕನಿಷ್ಠ ರೂ. 27,000/- ರಿಂದ ಗರಿಷ್ಠ ರೂ. 36,000/- ವರೆಗೆ ಗೌರವ ಧನವನ್ನು ನಿಗದಿಪಡಿಸಲಾಗಿದೆ.

2. ಸರ್ಕಾರದ ಆದೇಶ ಸಂಖ್ಯೆ:ಇಡಿ 52 ಡಿಟಿಇ 2024 ದಿನಾಂಕ:04.03.2024ರಂತೆ, ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ದಿನಾಂಕ:01-01-2024 ರಿಂದ ಜಾರಿಗೆ ಬರುವಂತೆ, ವಾರ್ಷಿಕ ರೂ. 50,000/- ರಂತೆ ಗರಿಷ್ಠ ರೂ. 5,00,000/- ಮೊತ್ತದ ಇಡಿಗಂಟು ಸೌಲಭ್ಯ ಮಂಜೂರು ಮಾಡಲಾಗಿದೆ.

3. ಸರ್ಕಾರದ ಆದೇಶದ ಮೂಲಕ ಆರೋಗ್ಯ ವಿಮೆ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಈ ಸಂಬಂಧ ಮಾಸಿಕ ರೂ. 800/- ಗಳನ್ನು ಆರೋಗ್ಯ ವಿಮೆಗೆ ಪಾವತಿಸಲಾಗುತ್ತಿದ್ದು, ಇದರಲ್ಲಿ ರೂ. 400/- ನ್ನು ಅತಿಥಿ ಉಪನ್ಯಾಸಕರಿಂದ ವಂತಿಗೆಯಾಗಿ ಕಟಾಯಿಸಿ, ಉಳಿದ ರೂ. 400/- ನ್ನು ಸರ್ಕಾರದ ವತಿಯಿಂದ ಭರಿಸಲಾಗುತ್ತಿದೆ.

4. ಸರ್ಕಾರದ ಆದೇಶ ಸಂಖ್ಯೆ:ಇಡಿ 52 ಡಿಟಿಇ 2024 ದಿನಾಂಕ:14.03.2024ರಂತೆ, ಅತಿಥಿ ಉಪನ್ಯಾಸಕರಿಗೆ ತಿಂಗಳಿಗೆ ಒಂದು ದಿನ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಲಾಗಿದೆ.

5. ತಾಂತ್ರಿಕ ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಹಿಳಾ ಅತಿಥಿ ಉಪನ್ಯಾಸಕರಿಗೆ ಗರಿಷ್ಠ 6 ತಿಂಗಳ ಕಾಲಾವಧಿಗೆ 'ಗೌರವಧನ ರಹಿತ' 'ಹೆರಿಗೆ ರಜೆ' (Maternity Leave) ಪಡೆಯಲು ಅವಕಾಶ ಕಲ್ಪಿಸಿದೆ. ಸದರಿ ಅವಧಿಯನ್ನು ಸೇವಾ ಅವಧಿ ಎಂದು ಪರಿಗಣಿಸಿ, ಹೆರಿಗೆ ರಜೆ ನಂತರ ಕಾರ್ಯನಿರ್ವಹಿಸಲು ಇಚ್ಚಿಸಿದಲ್ಲಿ, ಸಂಸ್ಥೆಯಲ್ಲಿನ ಕಾರ್ಯಭಾರದ ಅವಶ್ಯಕತೆಗೆ ಅನುಗುಣವಾಗಿ ಮುಂದುವರೆಯಲು ಅವಕಾಶ ಕಲ್ಪಿಸಲಾಗುತ್ತಿದೆ. ಜೊತೆಗೆ, ಮಹಿಳಾ ಅತಿಥಿ ಉಪನ್ಯಾಸಕರಿಗೆ ಮಾಹೆಗೆ ಒಂದು ದಿನದ ಋತುಚಕ್ರ ರಜೆಯನ್ನು ಸಹ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ.

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳಲ್ಲಿ ಎಐಸಿಟಿಇ ನಿಯಮಾನುಸಾರ ಅಗತ್ಯ ವಿದ್ಯಾರ್ಹತೆ ಹೊಂದಿರುವ ಅತಿಥಿ ಉಪನ್ಯಾಸಕರುಗಳು, ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಯಲ್ಲಿ ಮುಂದುವರೆಯಲು ಇಚ್ಚಿಸಿರುವ ಸಂದರ್ಭದಲ್ಲಿ, ಅದೇ ಸಂಸ್ಥೆಯಲ್ಲಿ ಮುಂದುವರಿಯಲು ಅವಕಾಶ ಕಲ್ಪಿಸಲಾಗಿದೆ.

**ಸಂಖ್ಯೆ:ಇಡಿ 138 ಟಿಪಿಇ 2025**

(ಡಾ. ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು